**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಆ/65/ಸುತ್ತೋಲೆ/ಆಯವ್ಯಯ/2017-18

**ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ**
ಅರಮನೆ ರಸ್ತೆ, ಬೆಂಗಳೂರು-560001
ದಿನಾಂಕ:12.09.2017.

**ಸುತ್ತೋಲೆ**

**ವಿಷಯ:** 2006ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ದಿ:01-01-2006 ರಿಂದ 23-12-2009 ರವರೆಗೆ ಯುಜಿಸಿ ಹಿಂಬಾಕಿಯಲ್ಲಿ ಪಡೆದಿರುವ ತುಟ್ಟಿ ಭತ್ಯೆ ವಸೂಲಾತಿ ಬಗ್ಗೆ

ಉಲ್ಲೇಖ:1) ಸರ್ಕಾರಿ ಆದೇಶ ಸಂಖ್ಯೆ:ಇಡಿ/37/ಯುಎನ್ಇ/2009 ದಿನಾಂಕ:24-12-2009

2) ಸರ್ಕಾರದ ಪತ್ರ ಸಂಖ್ಯೆ:ಇಡಿ/37/ಯುಎನ್ಇ/2009 ದಿನಾಂಕ:08-04-2010

3) ಈ ಕಛೇರಿಯ ಚಾಲನಾ ಆದೇಶ ಸಂಖ್ಯೆ:ಕಾಶಿಇ/149/ಯುಜಿಸಿ/2009-10/ಸಿವಿ-5 ದಿನಾಂಕ: 09-04-2010

** ** **

ಉಲ್ಲೇಖ (1) ರ ಸರ್ಕಾರ ಆದೇಶದಲ್ಲಿ 2006ರ ಪರಿಷ್ಕೃತ ಯುಜಿಸಿ ವೇತನ ಶ್ರೇಣಿಗಳನ್ನು ದಿನಾಂಕ:01-01-2006 ರಿಂದ ಜಾರಿಗೊಳಿಸಿ ದಿನಾಂಕ:24-12-2009 ರಿಂದ ಇತರೆ ಎಲ್ಲಾ ಸೌಲಭ್ಯ ಮತ್ತು ಭತ್ಯೆಗಳನ್ನು ಭವಿಷ್ಯಾವರ್ತಿಯಾಗಿ ವಿಸ್ತರಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಇಲಾಖಾ ವ್ಯಾಪ್ತಿಗೆ ಒಳಪಡುವ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಬೋಧಕರು/ಗ್ರಂಥಪಾಲಕರು ಮತ್ತು ದೈಹಿಕ ಶಿಕ್ಷಣ ಬೋಧಕರುಗಳಿಗೆ ಯುಜಿಸಿ ಹಿಂಬಾಕಿ ಮೊತ್ತವನ್ನು ಪಾವತಿಸಲಾಗಿರುತ್ತದೆ. ಆದರೆ ದಿನಾಂಕ:24-12-2009ರ ಸರ್ಕಾರದ ಆದೇಶದ ಕಂಡಿಕೆ 10 ಮತ್ತು 11 (b) ರಲ್ಲಿನ ಅಂಶಗಳಿಗೆ, ಉಲ್ಲೇಖ(2)ರ ಸರ್ಕಾರದ ಪತ್ರದಲ್ಲಿ ಈ ಕೆಳಕಂಡಂತೆ ಸ್ಪಷ್ಟೀಕರಣ ನೀಡಿರುತ್ತದೆ:

**"The revised UGC pay scales are effective from 1-1-2006. All Allowance such as DA, HRA, CCA and other benefits such as CAS, incentives, pensionary benefits etc., in the revised scale is admissible from prospective effect from the date of issue of orders."**

ಉಲ್ಲೇಖ (2)ರ ಸರ್ಕಾರದ ಸ್ಪಷ್ಟೀಕರಣ ಪತ್ರವನ್ನು ಆಯುಕ್ತಾಲಯದಿಂದ ಉಲ್ಲೇಖ(3) ರಲ್ಲಿ ಚಾಲನಾ ಆದೇಶವನ್ನು ಈ ಇಲಾಖೆ ವ್ಯಾಪ್ತಿಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ ಹಾಗೂ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಮತ್ತು ಕಾನೂನು ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮಕ್ಕಾಗಿ ಪರಿಚಲಿಸಲಾಗಿತ್ತು. ಸರ್ಕಾರ/ ಇಲಾಖೆಯ ಸ್ಪಷ್ಟ ನಿರ್ದೇಶನ ನೀಡಲಾಗಿದ್ದರು ಸಹ ಯುಜಿಸಿ

ಹಿಂಬಾಕಿ ಮೊತ್ತವನ್ನು ಪಾವತಿಸುವಾಗ **ತುಟ್ಟಿ ಭತ್ಯೆ ಹಾಗೂ ಇತರೆ ಭತ್ಯೆಗಳನ್ನು** ಒಳಗೊಂಡಂತೆ ಹಿಂಬಾಕಿ ಮೊತ್ತವನ್ನು ಪಾವತಿಸಿರುವುದು ತಿಳಿದು ಬಂದಿರುತ್ತದೆ. ಆದ್ದರಿಂದ ಈ ಕೂಡಲೇ ಜಾರಿಗೆ ಬರುವಂತೆ ಯುಜಿಸಿ ಹಿಂಬಾಕಿ ಮೊತ್ತದಲ್ಲಿ **ತುಟ್ಟಿ ಭತ್ಯೆ ಹಾಗೂ ಇತರೆ ಭತ್ಯೆಗಳನ್ನು** ಒಳಗೊಂಡು ಪಾವತಿಸಲಾಗಿರುವ ಮೊತ್ತವನ್ನು ಈ ತಿಂಗಳ ವೇತನದಿಂದಲೇ ಸಂಬಂಧಪಟ್ಟ ಬೋಧಕರು/ಗ್ರಂಥಪಾಲಕರು ಮತ್ತು ದೈಹಿಕ ಶಿಕ್ಷಣ ಬೋಧಕರುಗಳಿಂದ ವಸೂಲಾತಿ ಮಾಡುವಂತೆ ಈ ಮೂಲಕ ಸೂಚಿಸಲಾಗಿದೆ. ಹಾಗೂ ಕೈಗೊಂಡ ಕ್ರಮದ ಬಗ್ಗೆ ಈ ಕಛೇರಿಗೆ ವರದಿ ನೀಡುವುದು.

12/9/17

ಕಾಲೇಜು ಶಿಕ್ಷಣ ಆಯುಕ್ತರು.

**ಇವರಿಗೆ:**

1) ಎಲ್ಲಾಪ್ರಾದೇಶಿಕ ಜಂಟಿ ನಿರ್ದೇಶಕರುಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಧಾರವಾಡ, ಕಲಬುರಗಿ ಹಾಗೂ ಮಂಗಳೂರು –ಅಗತ್ಯಕ್ರಮಕ್ಕಾಗಿ.
2) ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ–ಅಗತ್ಯ ಕ್ರಮಕ್ಕಾಗಿ ಹಾಗೂ ಸಂಬಂಧಪಟ್ಟ ಅಧ್ಯಾಪಕರುಗಳಿಗೆ ಮೇಲಿನ ಸುತ್ತೋಲೆಯನ್ನು ಗಮನಕ್ಕೆ ತಂದು ಸಹಿ ಪಡೆಯುವುದು.
3) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಲೆಕ್ಕಾಧಿಕಾರಿಗಳಿಗೆ ಅಗತ್ಯಕ್ರಮಕ್ಕಾಗಿ.

**ಪ್ರತಿಯನ್ನು:**

1) ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
2) ಹೆಚ್ಚುವರಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3) ಮುಖ್ಯ ಆಡಳಿತಾಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
4) ಲೆಕ್ಕಾಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು

ಕರ್ನಾಟಕ ಸರ್ಕಾರ

ಸಂಖ್ಯೆ:ಕಾಶಿಇ/44/ಮ.ಲೇ.ಆ./2017-18/ಸೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ: 12.09.2017

**ಸುತ್ತೋಲೆ**

ವಿಷಯ: ಯುಜಿಸಿಯು ನಿಗದಿಪಡಿಸಿರುವ ಹೆಚ್ಚುವರಿ ವಿದ್ಯಾರ್ಹತೆಯಾದ NET/SLET/PhD ಪದವಿಯನ್ನು ಪಡೆಯದೆ 2006ರ ಯುಜಿಸಿ ವೇತನ ಶ್ರೇಣಿ ಪಡೆಯುತ್ತಿರುವ ಬಗ್ಗೆ.

*********

ಸರ್ಕಾರವು ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿನ ಬೋಧಕರುಗಳಿಗೆ 2006ರ ಪರಿಷ್ಕೃತ ಯುಜಿಸಿ ವೇತನ ಶ್ರೇಣಿಗಳನ್ನು ದಿ:24-12-2009ರ ಸರ್ಕಾರಿ ಆದೇಶ ಸಂಖ್ಯೆ: ಇಡಿ/37/ಯುಎನ್ಇ/2009ರಲ್ಲಿ ವಿಸ್ತರಿಸಿದ್ದು, ಸದರಿ ಆದೇಶದ ಕಂಡಿಕೆ 7(viii) - 7(ix) ಹಾಗೂ 21.5ಗಳಲ್ಲಿ ವಿಸ್ತರಿಸುವ ಬಗ್ಗೆ ಸೂಚನೆಗಳನ್ನು ನೀಡಲಾಗಿತ್ತು. ಸದರಿ ಕಂಡಿಕೆಗಳಲ್ಲಿ ನೀಡಲಾಗಿರುವ ಸೂಚನೆಗಳಂತೆ 2006ರ ಪರಿಷ್ಕೃತ ಯುಜಿಸಿ ವೇತನಶ್ರೇಣಿಗಳಲ್ಲಿ ಬೋಧಕರುಗಳಿಗೆ ತಮ್ಮ ಕಛೇರಿಯು ವೇತನ ನಿಗದಿಪಡಿಸಿರುವ ಕುರಿತು ವರದಿಯನ್ನು ಈ ಕಛೇರಿಗೆ ದಿನಾಂಕ: 15-09-2017ರೊಳಗೆ ಸಲ್ಲಿಸುವಂತೆ ಸೂಚಿಸುತ್ತಾ ಸದರಿ ಮಾಹಿತಿಯ ಹಾರ್ಡ್ ಕಾಪಿ ಹಾಗೂ ಸಾಫ್ಟ್ ಕಾಪಿಯನ್ನು ಇ-ಮೇಲ್ ವಿಳಾಸ (dceservice1@gmail.com) ಮೂಲಕ ಸಲ್ಲಿಸಲು ಸೂಚಿಸಲಾಗಿದೆ.

12/9/17

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ:

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಹಾಗೂ ಕಲಬುರಗಿ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

**ಪ್ರತಿಗಳು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು-ಮಾಹಿತಿಗಾಗಿ
2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
3. ಆಯುಕ್ತರ ಆಪ್ತಶಾಖೆ, ಕೇಂದ್ರ ಕಛೇರಿ, ಬೆಂಗಳೂರು.
4. ನಿರ್ದೇಶಕರ ಆಪ್ತಶಾಖೆ, ಕೇಂದ್ರ ಕಛೇರಿ, ಬೆಂಗಳೂರು.
5. ಮುಖ್ಯ ಆಡಳಿತಾಧಿಕಾರಿಗಳ ಆಪ್ತ ಶಾಖೆ, ಕೇಂದ್ರ ಕಛೇರಿ, ಬೆಂಗಳೂರು.
6. ಮ್ಯಾನೇಜರ್/ಅಧೀಕ್ಷಕರು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು-ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
7. ಕಛೇರಿ ಪ್ರತಿ.

44-AG objection